**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,ರವರ ನ್ಯಾಯಾಲಯ, ಕಡೂರು.**

**<u>ಸಿ.ಸಿ.ನಂ.4690/2025</u>**

<u>ಫಿರ್ಯಾದುದಾರರು</u> : ಸರ್ಕಾರದ ಪರವಾಗಿ ಬೀರೂರು ಪೊಲೀಸರಿಂದ

-ವಿರುದ್ಧ-

ಆರೋಪಿ : ಶ್ರೀ. ರೇವಂತ ಹೆಚ್.ಎನ್.

**<u>-: ದೋಷಾರೋಪಣೆ :-</u>**

ಶ್ರೀ ತಾಹಾಕಲೀಲ್ ಕೆ.ಎ., ಬಿ.ಎ. ಎಲ್‌ಎಲ್.ಬಿ., 3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಡೂರು ಆದ ನಾನು ಈ ಕೆಳಗೆ ಕಾಣಿಸಿರುವಃ

ಶ್ರೀ. ರೇವಂತ ಹೆಚ್.ಎನ್.
ಬಿನ್ ನರಸಿಂಹಯ್ಯ,
29 ವರ್ಷ, ವ್ಯವಸಾಯ,
ವಾಸಃ ಹುಲ್ಲೇಹಳ್ಳಿ ಗ್ರಾಮ,
ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಮಾಡುವುದೇನೆಂದರೆಃ

ದಿನಾಂಕಃ 09.11.2025 ರಂದು ಸಂಜೆ 7-15 ಗಂಟೆ ಸಮಯದಲ್ಲಿ, ಬೀರೂರು ಪೊಲೀಸ್ ಠಾಣಾ ವ್ಯಾಪ್ತಿಯ ಬೀರೂರು ಟೌನ್ ನಿಂದ ಬಿ.ಕೋಡಿಹಳ್ಳಿ ಗ್ರಾಮಕ್ಕೆ ಹೋಗುವ ರಸ್ತೆಯಲ್ಲಿರುವ ರಂಗಪ್ಪ ಲೇಔಟ್ ನ ಸಾರ್ವಜನಿಕ ರಸ್ತೆಯಲ್ಲಿ ಆರೋಪಿಯಾದ ನೀವು ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ಸಾರ್ವಜನಿಕ ಮಾರಾಟ ಮಾಡುವ ಉದ್ದೇಶದಿಂದ ಮದ್ಯವನ್ನು ಸಂಗ್ರಹಿಸಿಟ್ಟಿರುತ್ತೀರಿ. ಆದ್ದರಿಂದ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ರೀತ್ಯಾ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ, ಅದೇ ದಿನ, ಸಮಯ ಹಾಗೂ ಅದೇ ಸ್ಥಳದಲ್ಲಿ ಸುಮಾರು 1,000/- ರೂ ಬೆಲೆ ಬಾಳುವ 90 ಎಂ.ಎಲ್ ಮದ್ಯ ಇರುವ ರಾಜಾ ವಿಸ್ಕಿಯ 20 ಪೌಚುಗಳನ್ನು ಮತ್ತು 90 ಎಂ.ಎಲ್ ಮದ್ಯ ಇರುವ ಓಲ್ಡ್ ಟಾವರಿನ್ ವಿಸ್ಕಿಯ 10 ಮದ್ಯ ತುಂಬಿದ ಪೌಚುಗಳನ್ನು ಯಾವುದೇ ಪರವಾನಗಿ ಇಲ್ಲದೆ ಅಕ್ರಮವಾಗಿ ಸಾರ್ವಜನಿಕರಿಗೆ

Revantha.HN

ಮಾರಾಟ ಮಾಡುವ ಉದ್ದೇಶದಿಂದ ದಾಸ್ತಾನು ಹೊಂದಿದ್ದೀರಿ. ಆದ್ದರಿಂದ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ರೀತ್ಯಾ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ: 4/6/26

Revantha, HO

4/6/26

(ತಾಹಾಕಲೀಲ್ ಕೆ.ಎ.)
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ. ಕಡೂರು.